# ಕರ್ನಾಟಕ ವಿಧಾನಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 890 |
| 2 | ಸದಸ್ಯರ ಹೆಸರು | : | ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 14.07.2023. |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಹಲವು ಪ್ರದೇಶಾಭಿವೃದ್ಧಿ ಮಂಡಳಿಗಳಿಗೆ ಸದಸ್ಯರಾಗಲು ವಿಧಾನ ಸಭೆ ಸದಸ್ಯರು ಹಾಗೂ ವಿಧಾನ ಪರಿಷತ್ತು ಸದಸ್ಯರಿಗೆ ಕಾನೂನು ಬದ್ಧ ಅವಕಾಶ ಇದ್ದರು ಸಹ ವಿಧಾನ ಸಭೆಯಿಂದ ಮೇಲ್ಮನೆಗೆ ಆಯ್ಕೆಯಾಗುವ ಸದಸ್ಯರು ಮಾತ್ರ ಯಾವ ಕಾರಣಕ್ಕಾಗಿ ಈ ಹಕ್ಕಿನಿಂದ ವಂಚಿತರಾಗಿರುತ್ತಾರೆ; | ಯೋಜನಾ ಇಲಾಖೆಯ ವ್ಯಾಪ್ತಿಯಲ್ಲಿ ಬಯಲುಸೀಮೆ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಗಳು ಕಾರ್ಯ ನಿರ್ವಹಿಸುತ್ತಿವೆ.<br><br>ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ ಅಧಿನಿಯಮ, 1991 ಮತ್ತು ನಿಯಮಗಳು, 1993 ರ ಅಧ್ಯಾಯ-II ಪ್ರಕರಣ 3(3)(ಎ) ರಲ್ಲಿ "ಮಲೆನಾಡು ಪ್ರದೇಶವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಮಂಡಳಿಯ ಅಧಿಕಾರ ವ್ಯಾಪ್ತಿಯೊಳಗೆ ತಮ್ಮ ಚುನಾವಣಾ ಕ್ಷೇತ್ರಗಳನ್ನು ಹೊಂದಿರುವ ಸಂಸತ್ತಿನ ಮತ್ತು ರಾಜ್ಯ ವಿಧಾನ ಮಂಡಲದ ಸದಸ್ಯರು" ಮಂಡಲಿಗೆ ಸದಸ್ಯರಾಗಿರುತ್ತಾರೆ ಎಂದು ಇರುತ್ತದೆ.<br><br>ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಅಧಿನಿಯಮ 1994 ಮತ್ತು ನಿಯಮಗಳು, 1996 ರ ಅಧ್ಯಾಯ-II ಪ್ರಕರಣ 3(3)(ಎ) ರಲ್ಲಿ "ಬಯಲುಸೀಮೆ ಪ್ರದೇಶವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಮಂಡಳಿಯ ಅಧಿಕಾರ ವ್ಯಾಪ್ತಿಯೊಳಗೆ ತಮ್ಮ ಚುನಾವಣಾ ಕ್ಷೇತ್ರಗಳನ್ನು ಹೊಂದಿರುವ ಸಂಸತ್ತಿನ ಮತ್ತು ರಾಜ್ಯ ವಿಧಾನ ಮಂಡಲದ ಸದಸ್ಯರು" ಮಂಡಲಿಗೆ ಸದಸ್ಯರಾಗಿರುತ್ತಾರೆ ಎಂದು ಇರುತ್ತದೆ.<br><br>ಆದ್ದರಿಂದ ವಿಧಾನಸಭೆಯಿಂದ ಮೇಲ್ಮನೆಗೆ ಆಯ್ಕೆಯಾಗುವ ಸದಸ್ಯರು ಸದರಿ ಮಂಡಳಿಗಳ ಸದಸ್ಯರುಗಳಾಗಿರುವುದಿಲ್ಲ. |
| (ಆ) | ತಮ್ಮ ಕ್ಷೇತ್ರಗಳನ್ನು ಘೋಷಿಸಿಕೊಂಡರೂ ಅವರಿಗೆ ಮಂಡಳಿಯಲ್ಲಿ ಸ್ಥಾನ ಕಲ್ಪಿಸಲು ಕಾಯ್ದೆಯಲ್ಲಿ ಅವಕಾಶ ಇಲ್ಲವಾಗಿದ್ದು, ಸದರಿ ಕಾಯ್ದೆಗೆ ತಿದ್ದುಪಡಿ ತರಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು; | ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಯಲ್ಲಿ ಚುನಾವಣಾ ಕ್ಷೇತ್ರ ಗಳನ್ನು ಹೊಂದಿಲ್ಲದೇ ಇರುವ/ ಮತದಾರರಾಗಿಲ್ಲದೇ ಇರುವವರು ರಾಜ್ಯ ವಿಧಾನಸಭೆಯಿಂದ ವಿಧಾನಪರಿಷತ್ ಸದಸ್ಯರಾಗಿ ಚುನಾಯಿತರಾದಲ್ಲಿ ಅಂತಹ ಸದಸ್ಯರುಗಳು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಯ ಜಿಲ್ಲೆಗಳನ್ನು ನೋಡಲ್ ಜಿಲ್ಲೆಗಳೆಂದು ಆಯ್ಕೆ ಮಾಡಿಕೊಂಡಾಗ ಅಂತಹ |

| | | |
|---|---|---|
| | | ಸದಸ್ಯರುಗಳನ್ನು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಸದಸ್ಯರುಗಳಾಗಿ ಪರಿಗಣಿಸಿ ಎಲ್ಲಾ ಸೌಲಭ್ಯ/ ಹಕ್ಕು ಭಾದ್ಯತೆಗಳನ್ನು ನೀಡಲು ಸದರಿ ಮಂಡಳಿಗಳ ಕಾಯ್ದೆಗೆ ತಿದ್ದುಪಡಿ ತರುವ ಬಗ್ಗೆ ಈಗಾಗಲೇ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯ ಒಪ್ಪಿಗೆ ಪಡೆದಿದ್ದು, ಸಚಿವ ಸಂಪುಟದ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಸಚಿವ ಸಂಪುಟದ ಅನುಮೋದನೆಯ ನಂತರ ಕಾಯ್ದೆಗೆ ತಿದ್ದುಪಡಿ ತರುವ ಪ್ರಸಾವನೆಗೆ ವಿಧಾನ ಮಂಡಲದ ಅನುಮೋದನೆ ಪಡೆಯಲಾಗುವುದು. |
| (ಇ) | ಕಾಯ್ದೆಗೆ ತಿದ್ದುಪಡಿ ಮಾಡಲು ಸದನದಲ್ಲಿ ಮಂಡಿಸದಿರುವ ಉದ್ದೇಶ ಏನು; ಸದರಿ ಅಧಿವೇಶನದಲ್ಲಿ ಕಾಯ್ದೆಗೆ ತಿದ್ದುಪಡಿ ತಂದು ವಿಧಾನಸಭೆಯಿಂದ ಆಯ್ಕೆಯಾಗುವ ಮೇಲ್ಮನೆ ಸದಸ್ಯರಿಗೆ ನ್ಯಾಯ ದೊರಕಿಸಿ ಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಪ್ರಸ್ತಾವನೆಯು ಸಚಿವ ಸಂಪುಟದಲ್ಲಿ ಅನುಮೋದನೆಗೊಂಡ ನಂತರ ವಿಧಾನ ಮಂಡಲದಲ್ಲಿ ಮಂಡಿಸಲಾಗುವುದು. ಅನುಮೋದನ ನಂತರ ವಿಧಾನಪರಿಷತ್ ಸದಸ್ಯರಿಗೆ ಮಂಡಳಿಯ ಇತರೆ ಸದಸ್ಯರಿಗೆ ದೊರೆಯುವ ಸ್ಥಾನ ಮಾನ, ಸೌಲಭ್ಯಗಳು, ಅನುದಾನ ಮತ್ತು ಮಾನ್ಯತೆ ದೊರೆಯುವಂತೆ ಕ್ರಮವಹಿಸಲಾಗುತ್ತದೆ. |

ಸಂಖ್ಯೆ: ಪಿಡಿಎಸ್ 25 ಎಂಡಿಬಿ 2023

(ಡಿ.ಸುಧಾಕರ್)
ಯೋಜನೆ,ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಸಚಿವರು